ಎರಡನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ
ಬೆಂಗಳೂರು ಗ್ರಾಮಾಂತರ ಜಿಲ್ಲೆ, ಬೆಂಗಳೂರು

ಸ್ಪೆಷಲ್ ಕೇಸ್ ನಂಃ 204/2017

(ಪ್ರಾಸಾ-2 ಚಾಸಾ-2)
ಸಾಕ್ಷಿಗೆ ಪ್ರಮಾಣ ವಚನ ಭೋದಿಸಲಾಯಿತು
ದಿಃ 03.12.2024

| | | |
|---|---|---|
| ಸಾಕ್ಷಿದಾರರ ಹೆಸರು | - | ಕೃಷ್ಣ |
| ತಂದೆಯ ಹೆಸರು | - | ನರಸಿಂಹಪ್ಪ |
| ವಯಸ್ಸು | - | 26 ವರ್ಷ, |
| ಉದ್ಯೋಗ | - | ಕೂಲಿ ಕೆಲಸ |
| ವಾಸ | - | ಅದ್ದೇವಿಶ್ವನಾಥಪುರ |

ಮುಖ್ಯ ವಿಚಾರಣೆಃ ಮಾನ್ಯ ವಿಶೇಷ ಸರ್ಕಾರಿ ಅಭಿಯೋಜಕರಿಂದಃ

ಚಾಸಾ-1 ಗೊತ್ತು. ನಾನು ಮತ್ತು ಚಾಸಾ-1 ಪರಿಶಿಷ್ಟ ಜಾತಿಗೆ ಸೇರಿದವರು. 1 ರಿಂದ 5 ನೇ ಆರೋಪಿತರು ಗೊತ್ತು. ಆರೋಪಿತರು ನಮ್ಮ ಪಕ್ಕದ ಊರಿನವರು ಮತ್ತು ಕುರುಬ ಜಾತಿಗೆ ಸೇರಿದವರು. 2016 ರಲ್ಲಿ ಚಾಸಾ-1 ಇವರು ಶ್ರೀರಾಮನಹಳ್ಳಿ ಗ್ರಾಮದಲ್ಲಿ ಗೃಹಲಕ್ಷ್ಮಿ ಗೃಹ ನಿರ್ಮಾಣ ಸಂಸ್ಥೆ ಹತ್ತಿರ ಕೆಲಸ ಇದೆ ಎಂದು ನನ್ನನ್ನು ಕರೆದುಕೊಂಡು ಹೋಗಿದ್ದರು. ಅಲ್ಲಿ ನಾವು ಹೋದಾಗ ಸಮಯ ಬೆಳಗ್ಗೆ 11.30 ಆಗಿತ್ತು. ಸದರಿ ಜಮೀನಿನಲ್ಲಿ ಯಾಕೆ ಬಂದಿದ್ದೀರಾ ಎಂದು 1 ರಿಂದ 5 ನೇ ಆರೋಪಿತರು ಏಕಾಏಕಿ ಬಂದು ನಮ್ಮ ಮೇಲೆ ಹಲ್ಲೆ ಮಾಡಿ ಲೋಫರ್ ನನ್ನ ಮಕ್ಕಳಾ, ಯಾಕೆ ಒಳಗೆ ಬರಬೇಕು ಎಂದು ಅವಾಚ್ಯ ಶಬ್ದಗಳಿಂದ ಬೈದು ಕೀಳಾಗಿ ಬೈದು ಜಾತಿ ನಿಂದನೆ ಮಾಡಿ ಜೀವ ಬೆದರಿಕೆ ಹಾಕಿದರು. ಆರೋಪಿತರೆಲ್ಲರೂ ದೊಣ್ಣೆಗಳಿಂದ ಮತ್ತು ಕೈಗಳಿಂದ ನನಗೆ ಮತ್ತು ಚಾಸಾ-1 ರವರಿಗೆ ಹೊಡೆದರು. ಆರೋಪಿತರು ನಮಗೆ ಹಲ್ಲೆ ಮಾಡಿದ ದೊಣ್ಣೆಗಳನ್ನು ನೋಡಿದರೆ ಗುರುತಿಸಬಲ್ಲೆ. ಸಾಕ್ಷಿ ಸದರಿ ದೊಣ್ಣೆಗಳನ್ನು ನೋಡಿ ಗುರುತಿಸಿದ್ದು ಅವುಗಳು ಈಗಾಗಲೇ ಮು.ಮಾ-1 ರಿಂದ 3 ಎಂದು ಗುರುತಿಸಲಾಗಿದೆ.

2. ಆ ಸಮಯದಲ್ಲಿ ಚಾಸಾ-3 ಮತ್ತು 4 ರವರು ಹಾಜರಿದ್ದು ಗಲಾಟೆ ಬಿಡಿಸಿರುತ್ತಾರೆ. ಆರೋಪಿತರು ನಮಗೆ ಹೊಡೆದಿದ್ದರಿಂದ ನನ್ನ ಕಣ್ಣಿಗೆ ಏಟಾಗಿದ್ದು ಮತ್ತು ಚಾಸಾ-1 ರವರಿಗೆ ಗಲಾಟೆಯಲ್ಲಿ ತಲೆಗೆ ಪೆಟ್ಟಾಗಿದ್ದು ನಾನು ಮತ್ತು ಚಾಸಾ-1, ರಾಮಕೃಷ್ಣ ಆಸ್ಪತ್ರೆ, ಜಯನಗರದಲ್ಲಿ ಚಿಕಿತ್ಸೆ ಪಡೆದಿರುತ್ತೇವೆ. ಪೋಲಿಸರು ಆಸ್ಪತ್ರೆಗೆ ಬಂದು ಗಲಾಟೆ ಬಗ್ಗೆ ದೂರು ಪಡೆದರು. ನನ್ನನ್ನು ಸಹ ಪೋಲಿಸರು ವಿಚಾರಣೆ ಮಾಡಿರುತ್ತಾರೆ.

**ಪಾಟೀ ಸವಾಲುಃ ಆರೋಪಿತರ ಪರ ವಕೀಲರಿಂದಃ**

ಆರೋಪಿತರ ಪರ ವಕೀಲರು ತಮ್ಮ ಹಿರಿಯ ವಕೀಲರು ಈ ದಿನ ನ್ಯಾಯಾಲಯಕ್ಕೆ ಹಾಜರಾಗಲು ಸಾಧ್ಯವಾಗದೇ ಇರುವುದರಿಂದ ಪಾಟೀ ಸವಾಲು ಇಲ್ಲ ಮಾಡಲು ಕಾಲಾವಕೋಶ ಕೋರಿದ್ದು ಸೂಕ್ತ ಕಾರಣ ಇಲ್ಲದೇ ಇರುವುದರಿಂದ ಪಾಟೀ ಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಯಿತು.

**ಮರುವಿಚಾರಣೆಃ ಇಲ್ಲ**

(ಸಾಕ್ಷಿ ಹೇಳಿದಂತೆ ಹೇಳಿಕೆಯನ್ನು ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಿಸಿ ಓದಿ ಹೇಳಿದ್ದು ಸಾಕ್ಷಿ ಸರಿ ಇರುವುದಾಗಿ ಒಪ್ಪಿರುತ್ತಾರೆ ಎಂದು ದೃಡೀಕರಿಸುತ್ತೇನೆ)

ಓ ಹೇ ಸಾ ಸ ಸಹಿ ಮಾಡಿದ್ದಾರೆ,

(ಕೆ. ಗುರುಪ್ರಸಾದ್)
ಎರಡನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ
ಬೆಂಗಳೂರು ಗ್ರಾಮಾಂತರ ಜಿಲ್ಲೆ, ಬೆಂಗಳೂರು